VIJAYA KARNATAKA - 01/11/2019

# ಮಕ್ಕಳ ಚಲನಚಿತ್ರೋತ್ಸವ ವ್ಯವಸ್ಥಿತವಾಗಿ ನಡೆಯಲಿ

**ವಿಕ ಸುದ್ದಿಲೋಕ** ಕೊಪ್ಪಳ

ನವೆಂಬರ್ ಎರಡನೇ ವಾರದಿಂದ ಭಾರತೀಯ ಮಕ್ಕಳ ಚಲನಚಿತ್ರ ಸೊಸೈಟಿಯಿಂದ ನಡೆಯುವ ಮಕ್ಕಳ ಚಲನಚಿತ್ರೋತ್ಸವ ವ್ಯವಸ್ಥಿತವಾಗಿ ಆಯೋಜಿಸುವಂತೆ ಅಪರ ಜಿಲ್ಲಾಧಿಕಾರಿ ಎಂ.ಪಿ. ಮಾರುತಿ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಭಾರತೀಯ ಮಕ್ಕಳ ಚಲನ ಚಿತ್ರೋತ್ಸವ ಸೊಸೈಟಿ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹಭಾಗಿತ್ವದಲ್ಲಿ ನಡೆಯುವ ಮಕ್ಕಳ ಚಲನಚಿತ್ರೋತ್ಸವ ಕಾರ್ಯಕ್ರಮ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಇತ್ತೀಚೆಗೆ ಮಾತನಾಡಿದರು.

ಭಾರತೀಯ ಮಕ್ಕಳ ಚಲನಚಿತ್ರ ಸೊಸೈಟಿಯು ಮಕ್ಕಳಲ್ಲಿ ಸಾಮಾಜಿಕ ಪ್ರಜ್ಞೆ, ಜವಾಬ್ದಾರಿ ಮೂಡಿಸುವ ಸಂದೇಶವುಳ್ಳ ಚಿತ್ರಗಳಾದ 'ಅಲೆಗಳು' ಹಾಗೂ 'ಪುಟಾಣಿ ಪ್ರಪಂಚ' ಚಲನಚಿತ್ರಗಳನ್ನು ಜಿಲ್ಲೆಯ ನಾನಾ ಚಿತ್ರಮಂದಿರಗಳಲ್ಲಿ ಪ್ರದರ್ಶಿಸುತ್ತಿದೆ. ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹಭಾಗಿತ್ವದಲ್ಲಿ ಚಲನಚಿತ್ರೋತ್ಸವ ನಡೆಯುತ್ತಿರುವುದರಿಂದ ಆಯಾ ಚಿತ್ರಮಂದಿರಗಳ ಹತ್ತಿರದ ಶಾಲೆಗಳಿಂದ ಮಕ್ಕಳನ್ನು ಆಯ್ಕೆ ಮಾಡಿ, ಮಕ್ಕಳ ಸುರಕ್ಷತೆಗಾಗಿ ಅಗತ್ಯ ಪ್ರಮಾಣದ ಶಿಕ್ಷಕರನ್ನು ನಿಯೋಜಿಸಬೇಕು. ಚಲನ ಚಿತ್ರೋತ್ಸವ ಆಯೋಜಕರಿಗೆ ಸ್ಥಳೀಯವಾಗಿ ಹೆಚ್ಚಿನ ಪರಿಚಯವಿರದ ಕಾರಣ ಆಯೋಜಕರೊಂದಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಸಿಬ್ಬಂದಿ ನಿರಂತರವಾಗಿ ಸಂಪರ್ಕದಲ್ಲಿದ್ದು, ಚಲನಚಿತ್ರೋತ್ಸವಕ್ಕೆ ಯಾವುದೇ ತೊಂದರೆಯಾಗದಂತೆ ಕಾರ್ಯ ನಿರ್ವಹಿಸಬೇಕು ಎಂದರು.



ಕೊಪ್ಪಳ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ಸಭೆ ಜರುಗಿತು.

ಕೊಪ್ಪಳದಲ್ಲಿ ಶಿವ ಹಾಗೂ ಶ್ರೀ ಲಕ್ಷ್ಮಿ ಚಿತ್ರಮಂದಿರ, ಯಲಬುರ್ಗಾದಲ್ಲಿ ಮಂಜುನಾಥ, ಪ್ರವೀಣ ಹಾಗೂ ಶಕ್ತಿ, ಗಂಗಾವತಿಯಲ್ಲಿ ಕನಕದುರ್ಗಾ ಹಾಗೂ ಶಿವೆ ಚಿತ್ರಮಂದಿರಗಳಲ್ಲಿ ಅವರ ದೈನಂದಿನ ಪ್ರದರ್ಶನಗಳಿಗೆ ತೊಂದರೆ ಆಗದಂತೆ ಪ್ರತಿದಿನ ಬೆಳಗ್ಗೆ 9 ಗಂಟೆಯಿಂದ 10.30 ಗಂಟೆ ವರೆಗೆ ಮಕ್ಕಳ ಚಲನಚಿತ್ರ ಪ್ರದರ್ಶನವಾಗಲಿವೆ. ಪ್ರತಿ ಪ್ರದರ್ಶನಕ್ಕೂ ಚಿತ್ರಮಂದಿರಗಳಿಗೆ ಸೊಸೈಟಿಯಿಂದ ನಿಗದಿ ಪಡಿಸಿದ 2,500 ರೂ. ನೀಡಲಾಗುತ್ತದೆ. ಆಯ್ಕೆಯಾದ ಚಿತ್ರಮಂದಿರ ಮಾಲೀಕರು ಅಥವಾ ವ್ಯವಸ್ಥಾಪಕರು ಮಕ್ಕಳ ಚಲನಚಿತ್ರ ಪ್ರದರ್ಶನಕ್ಕೆ ಸಹಕರಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಭಾರತೀಯ ಮಕ್ಕಳ ಚಲನಚಿತ್ರ ಸೊಸೈಟಿಯ ಅಧಿಕಾರಿ ವಿ.ಎಸ್. ಅಗಿಲಾ, ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕಾರಿ ಕಂಬಳಿ, ತಹಸೀಲ್ದಾರ್ ಜೆ.ಬಿ. ಮಜ್ಗಿ, ಡಿವೈಎಸ್ಪಿ ವೆಂಕಟಪ್ಪ ನಾಯಕ ಇದ್ದರು.

Scanned by CamScanner